ದಿನಾಂಕ 08-09-2022 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆ : ವಾದಿಯ ಪರ ಶ್ರೀ ಎಸ್.ಬಿ.ಎಸ್ ವಕೀಲರಿಂದ ಶ್ರೀ ಎನ್.ಆರ್.ಬಿ ವಕೀಲರ ಪರವಾಗಿಃ**

ನಾನು ನನ್ನ ಮುಖ್ಯ ವಿಚಾರಣೆಯ ಬದಲಾಗಿ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿರುವ ಸಂಗತಿಗಳನ್ನು ನಾನೇ ವಕೀಲರಿಗೆ ಹೇಳಿ ಬರೆಸಿರುತ್ತೇನೆ. ಅದರಲ್ಲಿರುವ ಸಂಗತಿಗಳು ಸತ್ಯದಿಂದ ಕೂಡಿದ್ದು, ಪ್ರಮಾಣ ಪತ್ರದಲ್ಲಿರುವ ಸಹಿಗಳು ನನ್ನದೇ ಆಗಿರುತ್ತವೆ.

ಸಾವೀಕೇರಿ ಗ್ರಾಮದ ಸ ನಂಃ 34/1 ರ ಜಮೀನಿನ ನಿಪಹಣಿ ಪತ್ರಿಕೆಯನ್ನು ಹಾಜರು ಮಾಡಿದ್ದು ನಿ.ಪಿ-1 ಎಂದು, ಮುಟೇಷನ್ ರಿಜಿಸ್ಟರಿನ ದೃಢೀಕೃತ ನಕಲನ್ನು ಹಾಜರು ಮಾಡಿದ್ದು ನಿ.ಪಿ-2 ಎಂದು, ಮುಟೇಷನ್ ರಿಜಿಸ್ಟರಿನ ಮತ್ತೊಂದು ದೃಢೀಕೃತ ನಕಲನ್ನು ಹಾಜರು ಮಾಡಿದ್ದು ನಿ.ಪಿ-3 ಎಂದು, ಡ ಸಂಃ307 ರ ದೃಢೀಕೃತ ನಕಲನ್ನು ಹಾಜರು ಮಾಡಿದ್ದು ನಿ.ಪಿ-4 ಎಂದು, ಆಸ್ತಿ ಸಂಃ 140 ರ ಕರ ನಿರ್ಧರಣಾ ಪಟ್ಟಿಯ ಐದು ದೃಢೀಕೃತ ನಕಲುಗಳನ್ನು ಹಾಜರು ಮಾಡಿದ್ದು ಅವುಗಳನ್ನು ಕ್ರಮವಾಗಿ ನಿ.ಪಿ-5 ರಿಂದ 9 ಎಂದು, ದಿಃ 26-02-2014 ರ ಠರಾವಿನ ದೃಢೀಕೃತ ನಕಲನ್ನು ಹಾಜರು ಮಾಡಿದ್ದು ನಿ.ಪಿ-10 ಎಂದು, ದಿಃ 28-08-2015 ರ ಠರಾವಿನ ದೃಢೀಕೃತ ನಕಲನ್ನು ಹಾಜರು ಮಾಡಿದ್ದು ನಿ.ಪಿ-11 ಎಂದು, ದಿಃ 22-08-2015 ರ ಠರಾವಿನ ದೃಢೀಕೃತ ನಕಲನ್ನು ಹಾಜರು ಮಾಡಿದ್ದು ನಿ.ಪಿ-12 ಎಂದು, ವರದಿಯ ದೃಢೀಕೃತ ನಕಲನ್ನು ಹಾಜರು ಮಾಡಿದ್ದು ನಿ.ಪಿ-13 ಎಂದು, ಮೃತ 1 ನೇ ವಾದಿಯು ಕಾರ್ಯನಿರ್ವಾಹಕರು ತಾಲೂಕು ಪಂಚಾಯತ್ ಹಾನಗಲ್ಲ ರವರಿಗೆ ಸಲ್ಲಿಸಿದ ಸ್ವೀಕೃತಿ ಅರ್ಜಿಯನ್ನು ಹಾಜರು ಮಾಡಿದ್ದು ನಿ.ಪಿ-14 ಎಂದು, 3- ಕಂದಾಯ ರಸೀದಿಗಳನ್ನು ಹಾಜರು ಮಾಡಿದ್ದು ಅವುಗಳನ್ನು ಕ್ರಮವಾಗಿ ನಿ.ಪಿ-15 ರಿಂದ 17 ಎಂದು ಮತ್ತು ಮರಣ ಪ್ರಮಾಣ ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ-18 ಎಂದು ಗುರುತಿಸಲಾಯಿತು.

(ಮುಂದುವರೆದ ಮುಖ್ಯ ವಿಚಾರಣೆಗೆ ಸಮಯಾವಕಾಶ ಕೋರಿದ್ದು, ಮುಂದುವರೆದ ಮುಖ್ಯ ವಿಚಾರಣೆಗೆ ಮುಂದೂಡಲಾಯಿತು).

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ಓ. ಹೇ. ಕೆ ಸರಿ ಇದೆ
ಎಂದು ಒಪ್ಪಿರುತ್ತಾರೆ.

Sd/-

ದಿವಾಣಿ ನ್ಯಾಯಾಧೀಶರು ಮತ್ತು ಜೆ ಎಂ ಎಫ್ ಸಿ
ಹಾನಗಲ್

ಸಾಕ್ಷಿದಾರರ ಸಹಿ